K.B.A.
RECEIVED
ON 24/06/16
No. 77634

**ಕರ್ನಾಟಕ ಸರ್ಕಾರ**

ನಂ: ಡಿವೈಇಎಸ್/ಕ್ರೀಕಪಂ/08/2016-17

ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ: 12-05-2016

**ಸುತ್ತೋಲೆ**

ವಿಷಯ: 2015 ನೇ ಸಾಲಿನ ಏಕಲವ್ಯ/ಜೀವಮಾನ ಸಾಧನೆ/ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನಿಸುವ ಬಗ್ಗೆ

ಉಲ್ಲೇಖ: ಸಆಸಂ: ಯುಸೇಇ 312 ಯುಸೇಕ್ರೀ 2014, ದಿನಾಂಕ: 22-07-2014.

******

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಉಲ್ಲೇಖಿತ ಸರ್ಕಾರಿ ಆದೇಶದ ಅನುಬಂಧ-2 ರಲ್ಲಿ ನಮೂದಿಸಿರುವ 40 ಅಂಗೀಕೃತ ಕ್ರೀಡೆಗಳಲ್ಲಿ ಪ್ರತಿ ವರ್ಷದಂತೆ 2015 ನೇ ವರ್ಷದಲ್ಲಿ ಹಾಗೂ ಅದರ ಹಿಂದಿನ 4 ವರ್ಷಗಳಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ಅರ್ಹತೆಯುಳ್ಳ ಪುರುಷ/ಮಹಿಳಾ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಲಾಗುವುದು. ಕ್ರೀಡಾ ಕ್ಷೇತ್ರದಲ್ಲಿ ಕ್ರೀಡಾಪಟುವಾಗಿ/ತರಬೇತುದಾರರಾಗಿ ನಿರಂತರ ಸೇವೆ ಸಲ್ಲಿಸಿ ಸಾಧನೆ ಮಾಡಿದಂತಹ ಹಿರಿಯ ಕ್ರೀಡಾಪಟು/ ತರಬೇತುದಾರರಿಗೆ ಜೀವನ ಪರ್ಯಂತ ಸಾಧನಾ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು. ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸುತ್ತಿದೆ.

ಅದರಂತೆ 2015 ನೇ ಸಾಲಿನ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಈ ಸಂಬಂಧ ಜಿಲ್ಲೆಯ ಉಪ/ ಸಹಾಯಕ ನಿರ್ದೇಶಕರುಗಳು ತಮ್ಮ ಜಿಲ್ಲೆಯ ಸ್ಥಳೀಯ ಪತ್ರಿಕೆಗಳಲ್ಲಿ ಸದರಿ ಪ್ರಶಸ್ತಿಗಳ ಅರ್ಜಿ ಆಹ್ವಾನಕ್ಕೆ ಸಂಬಂಧಿಸಿದಂತೆ ವ್ಯಾಪಕ ಪ್ರಚಾರ ನೀಡುವ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಸರ್ಕಾರಿ ಆದೇಶದ ಮಾರ್ಗಸೂಚಿಗಳಂತೆ ಅರ್ಹ ಪುರುಷ ಹಾಗೂ ಮಹಿಳಾ ಕ್ರೀಡಾಪಟುಗಳ ಹೆಸರುಗಳನ್ನು ಸಾಧನೆಯ ಅರ್ಹತೆಯ ಆಧಾರದ ಮೇಲೆ ನಿಗಧಿತ ನಮೂನೆಗಳಲ್ಲಿ ವಿವರಗಳನ್ನು ಭರ್ತಿ ಮಾಡಿದ ಅರ್ಜಿಗಳನ್ನು ಶಿಫಾರಸ್ಸು ಮಾಡಿ ಈ ಕಛೇರಿಗೆ ಕಳುಹಿಸಿಕೊಡುವಂತೆ ತಿಳಿಸಲಾಗಿದೆ. ಅರ್ಜಿ ನಮೂನೆ ಮತ್ತು ವಿವರಗಳು ವೆಬ್ ವಿಳಾಸ www.karnatakayouthportal.in ನಲ್ಲೂ ಲಭ್ಯವಿದ್ದು ಡೌನ್‌ಲೋಡ್ ಮಾಡಿ ಭರ್ತಿ ಮಾಡಬಹುದಾಗಿದೆ.

**ಅರ್ಜಿಗಳನ್ನು ದಿನಾಂಕ: 20-06-2016ರ ಒಳಗಾಗಿ ಈ ಕಛೇರಿಗೆ ತಲುಪುವಂತೆ ಕಳುಹಿಸಲು ಸೂಚಿಸಲಾಗಿದೆ. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲವೆಂದು ತಿಳಿಸಿದೆ.**

ನಿರ್ದೇಶಕರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1) ಮಹಾ ನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು

2) ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

3) ಅಧ್ಯಕ್ಷರು, ..................... ಕ್ರೀಡಾ ಸಂಸ್ಥೆ, ಬೆಂಗಳೂರು

3) ಹೆಚ್ಚುವರಿ ಪ್ರತಿ.